# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part –IV A | *ಬೆಂಗಳೂರು*, ಶುಕ್ರವಾರ, ೧೯, ಫೆಬ್ರವರಿ, ೨೦೨೧ (ಮಾಘ, ೩೦, *ಶಕವರ್ಷ*, ೧೯೪೨)<br>BENGALURU, FRIDAY, 19, FEBRUARY, 2021 (Magha, 30, SHAKAVARSHA, 1942) | ನಂ. ೧೯೩<br>No. 193 |
|---|---|---|

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 83 SHASANA 2020, BENGALURU, DATED:19.02.2021**

The Karnataka Municipalities and Certain other Law (Amendment) Bill, 2021 ಇದಕ್ಕೆ 2021ರ ಫೆಬ್ರುವರಿ ತಿಂಗಳ 17ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 7 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## KARNATAKA ACT NO 7 OF 2021

(First published in the Karnataka Gazette Extra-ordinary on the 19th day of February, 2021)

## THE KARNATAKA MUNICIPALITIES AND CERTAIN OTHER LAW (AMENDMENT) ACT, 2021

(Received the assent of the Governor on the 17th day of February, 2021)

An Act further to amend the Karnataka Municipalities Act, 1964 and the Karnataka Municipal Corporations Act, 1976.

Whereas it is expedient further to amend the Karnataka Municipalities Act, 1964 (Karnataka Act 22 of 1964) and the Karnataka Municipal Corporations Act, 1976 (Karnataka Act 14 of 1977) for the purposes hereinafter appearing;

Be it enacted by the Karnataka State Legislature in the seventy second year of the Republic of India as follows:-

**1. Short title and commencement.-** (1) This Act may be called the Karnataka Municipalities and Certain Other Law (Amendment) Act, 2021.

(2) It shall come into force at once.

**2. Amendment of Karnataka Act 22 of 1964.-** In the Karnataka Municipalities Act, 1964 (Karnataka Act 22 of 1964), in section 105,-

(i) in sub-section (1), after the proviso, the following shall be inserted, namely:-

"Provided further that, for the financial year 2020-2021 if the owner or occupier who is liable to pay tax files his returns and also pay tax which is due within one month from the date of commencement of the Karnataka Municipalities and Certain Other Law (Amendment) Act, 2021 he shall also be allowed a rebate of five percent on the tax payable by him.

Provided also that, in case property tax is paid in full in the financial year 2020-21 before the commencement of the Karnataka Municipalities and Certain Other Law (Amendment) Act, 2021, the rebate so allowed shall be adjusted in payment of tax for the future years."

(ii) after sub-section (8), the following proviso shall be inserted, namely:-

"Provided that, for the financial year 2020-2021, the property tax shall be paid by the person primarily liable, within one month after the commencement of the Karnataka Municipalities and Certain Other Law (Amendment) Act, 2021."

**3. Amendment of Karnataka Act 14 of 1977.-** In the Karnataka Municipal Corporations Act, 1976 (Karnataka Act 14 of 1977),-

(i) in section 112, after sub-section (3), the following shall be inserted, namely:-

"Provided that, for the financial year 2020-2021, the property tax shall be paid by the person primarily liable, within one month from the date of commencement of the Karnataka Municipalities and Certain Other Law (Amendment) Act, 2021."

(ii) in section 112A, in sub-section (1), after the proviso, following shall be inserted, namely:-

“Provided further that, for the financial year 2020-2021 if the owner or occupier who is liable to pay tax files return and also pays tax which is due or within one month from the date of commencement of the Karnataka Municipalities and Certain Other Law (Amendment) Act, 2021, he shall be allowed a rebate of five percent on the tax payable by him.

Provided also that, in case property tax is paid in full in the financial year 2020-21 before the commencement of the Karnataka Municipalities and Certain Other Law (Amendment) Act, 2021, the rebate so allowed shall be adjusted in payment of tax for the future years.”

By Order and in the name of
**the Governor of Karnataka,**

**(K. DWARAKANATH BABU)**
Secretary to Government
Department of Parliamentary Affairs
and Legislation

**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 83 ಶಾಸನ 2020, ಬೆಂಗಳೂರು, ದಿನಾಂಕ:19.02.2021**

The Karnataka Official Language Act, 1963 (Karnataka Act 26 of 1963) ರ ಪ್ರಕರಣ 5-ಎ ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ the Karnataka Municipalities and Certain Other Law (Amendment) Act, 2021 (Karnataka Act 7 of 2021) ನ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2021 ರ ಕರ್ನಾಟಕ ಅಧಿನಿಯಮ ಸಂಖ್ಯೆ: 7**
(**2021** ರ ಫೆಬ್ರುವರಿ ತಿಂಗಳ 19 ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು ( ತಿದ್ದುಪಡಿ) ಅಧಿನಿಯಮ, 2021**
(**2021 ರ** ಫೆಬ್ರುವರಿ ತಿಂಗಳ 17 ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ನ್ನು ಮತ್ತು ಕರ್ನಾಟಕ ನಗರಪಾಲಿಕೆಗಳ ಅಧಿನಿಯಮ, 1976ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 22) ಮತ್ತು ಕರ್ನಾಟಕ ನಗರಪಾಲಿಕೆಗಳ

ಅಧಿನಿಯಮ, 1976ನ್ನು (1977ರ ಕರ್ನಾಟಕ ಅಧಿನಿಯಮ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 1964ರ ಕರ್ನಾಟಕ ಅಧಿನಿಯಮ 22ರ ತಿದ್ದುಪಡಿ.-** ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ (1964ರ ಕರ್ನಾಟಕ ಅಧಿನಿಯಮ 22) 105ನೇ ಪ್ರಕರಣದಲ್ಲಿ,-

(i) (1)ನೇ ಉಪ-ಪ್ರಕರಣದಲ್ಲಿನ ಪರಂತುಕದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು, 2020-21ನೇ ಹಣಕಾಸು ವರ್ಷಕ್ಕೆ ತೆರಿಗೆಯನ್ನು ಪಾವತಿಸಲು ಹೊಣೆಗಾರನಾಗಿರುವ ಮಾಲೀಕ ಅಥವಾ ಅಧಿಭೋಗದಾರನು ಆತನ ವಿವರಪಟ್ಟಿಕೆ (ರಿಟರ್ನ್ಸ್) ಸಲ್ಲಿಸಿದಲ್ಲಿ ಮತ್ತು ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭದ ದಿನಾಂಕದಿಂದ ಒಂದು ತಿಂಗಳ ಒಳಗಾಗಿ ಬಾಕಿ ಇರುವ ತೆರಿಗೆಯನ್ನು ಕೂಡಾ ಪಾವತಿಸಿದಲ್ಲಿ ಆತನು ಪಾವತಿಸಬಹುದಾದ ತೆರಿಗೆಯ ಮೇಲೆ ಆತನಿಗೆ ಶೇಕಡ ಐದರ ರಿಯಾಯಿತಿಯನ್ನೂ ಸಹ ಅನುಮತಿಸತಕ್ಕದ್ದು.

ಅಲ್ಲದೆ ಪರಂತು, ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭಕ್ಕೆ ಮೊದಲು 2020-21ನೇ ಹಣಕಾಸು ವರ್ಷದಲ್ಲಿ ಪೂರ್ತಿಯಾಗಿ ಆಸ್ತಿ ತೆರಿಗೆಯನ್ನು ಪಾವತಿಸಿದ ಸಂದರ್ಭದಲ್ಲಿ ಹಾಗೆ ಅನುಮತಿಸಲಾದ ರಿಯಾಯಿತಿಯನ್ನು ಮುಂಬರುವ ವರ್ಷಗಳ ತೆರಿಗೆ ಪಾವತಿಯಲ್ಲಿ ಹೊಂದಿಸಿಕೊಳ್ಳತಕ್ಕದ್ದು."

(ii) (8)ನೇ ಉಪ-ಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, 2020-21ನೇ ಹಣಕಾಸು ವರ್ಷಕ್ಕಾಗಿ, ಆಸ್ತಿ ತೆರಿಗೆಯನ್ನು ಪಾವತಿಸಲು ಮೂಲತಃ ಹೊಣೆಗಾರನಾಗಿರುವ ವ್ಯಕ್ತಿಯು ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭದ ದಿನಾಂಕದ ತರುವಾಯ ಒಂದು ತಿಂಗಳ ಒಳಗಾಗಿ ಅದನ್ನು ಪಾವತಿಸತಕ್ಕದ್ದು."

**3. 1977ರ ಕರ್ನಾಟಕ ಅಧಿನಿಯಮ 14ರ ತಿದ್ದುಪಡಿ.-** ಕರ್ನಾಟಕ ನಗರಪಾಲಿಕೆಗಳ ಅಧಿನಿಯಮ, 1976ರಲ್ಲಿ (1977ರ ಕರ್ನಾಟಕ ಅಧಿನಿಯಮ 14),-

(i) 112ನೇ ಪ್ರಕರಣದಲ್ಲಿ, (3)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, 2020-2021ನೇ ಹಣಕಾಸು ವರ್ಷಕ್ಕಾಗಿ, ಆಸ್ತಿ ತೆರಿಗೆಯನ್ನು ಪಾವತಿಸಲು ಮೂಲತಃ ಹೊಣೆಗಾರನಾಗಿರುವ ವ್ಯಕ್ತಿಯು ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭದ ದಿನಾಂಕದಿಂದ ಒಂದು ತಿಂಗಳ ಒಳಗಾಗಿ ಅದನ್ನು ಪಾವತಿಸತಕ್ಕದ್ದು."

(ii) 112ಎ ಪ್ರಕರಣದ (1)ನೇ ಉಪಪ್ರಕರಣದಲ್ಲಿ, ಪರಂತುಕದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



"ಮತ್ತು ಪರಂತು, 2020-2021ನೇ ಹಣಕಾಸು ವರ್ಷಕ್ಕೆ ತೆರಿಗೆಯನ್ನು ಪಾವತಿಸಲು ಹೊಣೆಗಾರನಾಗಿರುವ ಮಾಲೀಕ ಅಥವಾ ಅಧಿಭೋಗದಾರನು ಆತನ ವಿವರಪಟ್ಟಿಕೆ (ರಿಟರ್ನ್ಸ್) ಸಲ್ಲಿಸಿದಲ್ಲಿ ಮತ್ತು ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭದ ದಿನಾಂಕದಿಂದ ಒಂದು ತಿಂಗಳ ಒಳಗಾಗಿ ಬಾಕಿ ಇರುವ ತೆರಿಗೆಯನ್ನು ಪಾವತಿಸಿದಲ್ಲಿ ಆತನು ಪಾವತಿಸಬಹುದಾದ ತೆರಿಗೆಯ ಮೇಲೆ ಆತನಿಗೆ ಶೇಕಡ ಐದರ ರಿಯಾಯಿತಿಯನ್ನೂ ಸಹ ಅನುಮತಿಸತಕ್ಕದ್ದು.

ಅಲ್ಲದೆ ಪರಂತು, ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭಕ್ಕೆ ಮೊದಲು 2020-21ನೇ ಹಣಕಾಸು ವರ್ಷದಲ್ಲಿ ಪೂರ್ತಿಯಾಗಿ ಆಸ್ತಿ ತೆರಿಗೆಯನ್ನು ಪಾವತಿಸಿದ ಸಂದರ್ಭದಲ್ಲಿ ಹಾಗೆ ಅನುಮತಿಸಲಾದ ರಿಯಾಯಿತಿಯನ್ನು ಮುಂಬರುವ ವರ್ಷಗಳ ತೆರಿಗೆ ಪಾವತಿಯಲ್ಲಿ ಹೊಂದಿಸಿಕೊಳ್ಳತಕ್ಕದ್ದು."

The above translation of the Karnataka Municipalities and Certain other Law (Amendment) Act, 2021 (Karnataka Act 7 of 2021) shall be authoritative text in the Kannada language under section 5A of the Karnataka Official Language Act, 1963 (Karnataka Act 26 of 1963).

**ವಜುಭಾಯಿ ವಾಲ**
**ಕರ್ನಾಟಕ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE Date: 2021.02.19 16:54:27 +05'30'